**Akashvani : Bangalore**
**Regional Bulletin In Kannada**
**10.05.2025 / 14.30 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**10.05.2025 / 14.30  hrs**
**<><*<><>*><>**

## ಮುಖ್ಯಾಂಶಗಳು

1. ದಾಳಿಗೆ ಪ್ರತಿಯಾಗಿ ಪಾಕಿಸ್ತಾನದ ಮಿಲಿಟರಿ ನೆಲೆಗಳ ಮೇಲೆ ಭಾರತೀಯ ಸೇನೆಯಿಂದ ವಾಯುದಾಳಿ
2. ರಕ್ಷಣಾ ಸಚಿವ, ಭಾರತೀಯ ಸೇನೆಯ ಮೂರು ಪಡೆಗಳ ಮುಖ್ಯಸ್ಥರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಭೆ
3. ಮಹಿಳೆಯರು ಸ್ವಾವಲಂಬಿಗಳಾಗಿ ಬದುಕು ಕಟ್ಟಿಕೊಳ್ಳುವಲ್ಲಿ ಸ್ವ-ಸಹಾಯ ಗುಂಪುಗಳ ಪಾತ್ರ ಮಹತ್ವದ್ದು- ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
4. ರಾಜ್ಯಾದ್ಯಂತ ಇಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ.

**********

ಪಾಕಿಸ್ತಾನದ ಪ್ರಚೋದನಾಕಾರಿ ಕ್ರಮಗಳಿಗೆ ಪ್ರತಿಕಾರವಾಗಿ ಭಾರತೀಯ ಸಶಸ್ತ್ರ ಪಡೆಗಳು, ತಾಂತ್ರಿಕ ಮೂಲಸೌಕರ್ಯ, ನಿರ್ದೇಶನ ಮತ್ತು ನಿಯಂತ್ರಣ ಕೇಂದ್ರ, ರಾಡಾರ್ ಮತ್ತು ಶಸ್ತ್ರಾಸ್ತ್ರ ಸಂಗ್ರಹಣ ತಾಣಗಳು ಸೇರಿದಂತೆ ಪಾಕಿಸ್ತಾನದ ಮಿಲಿಟರಿ ನೆಲೆಗಳ ಮೇಲೆ ನಿಖರ ದಾಳಿ ನಡೆಸಿವೆ ಎಂದು ಭಾರತೀಯ ವಾಯುಪಡೆಯ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಆಪರೇಷನ್ ಸಿಂದೂರ್ ಕುರಿತ ವಿಶೇಷ ಸುದ್ದಿಗೋಷ್ಠಿಯಲ್ಲಿ, ಸಶಸ್ತ್ರ ಪಡೆಗಳು ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರಿಸಿದರು.  ರಫೀಕಿ, ಮುರಿದ್, ಚಕ್ಲಾಲಾ, ರಹಿಮ್ಯಾರ್ ಖಾನ್ ಸೇರಿದಂತೆ ಹಲವು ಪ್ರದೇಶಗಳನ್ನು ಗುರಿಯಾಗಿಸಿ, ಭಾರತೀಯ ಯುದ್ಧ ವಿಮಾನಗಳು ವೈಮಾನಿಕ ದಾಳಿ ನಡೆಸಿವೆ ಎಂದು ಮಾಹಿತಿ ನೀಡಿದರು.   ಪರಿಸ್ಥಿತಿಯನ್ನು ಮತ್ತಷ್ಟು ಉಲ್ಬಣಗೊಳಿಸುವ ಉದ್ದೇಶದಿಂದ ಪಾಕಿಸ್ತಾನಿ ಸೇನೆ ತನ್ನ ಪಡೆಗಳನ್ನು ಮತ್ತಷ್ಟು ನಿಯೋಜಿಸುತ್ತಿರುವುದನ್ನು ಗಮನಿಸಲಾಗಿದೆ. ಭಾರತೀಯ ಸಶಸ್ತ್ರ ಪಡೆಗಳು ಕಾರ್ಯಾಚರಣೆಗೆ ಸನ್ನದ್ಧ ಸ್ಥಿತಿಯಲ್ಲಿವೆ ಹಾಗೂ ಈವರೆಗಿನ ಪಾಕಿಸ್ತಾನದ ಎಲ್ಲಾ ದಾಳಿಯನ್ನು ಪರಿಣಾಮಕಾರಿಯಾಗಿ ಎದುರಿಸಲಾಗಿದೆ ಎಂದರು.ಪಸೂರ್ ಮತ್ತು ಸೈಲ್‌ಕೋಟ್ ವಾಯುನೆಲೆಯಲ್ಲಿರುವ ರಾಡಾರ್ ತಾಣಗಳನ್ನು ಗುರಿಯಾಗಿಸಲಾಗಿತ್ತು. ಪಾಕಿಸ್ತಾನದ ಕ್ರಮಕ್ಕೆ ಪ್ರತಿಯಾಗಿ ಭಾರತೀಯ ಸೇನೆ ಎದುರಾಳಿ ಮಿಲಿಟರಿ ಗುರಿಗಳನ್ನು ಪತ್ತೆಹಚ್ಚಿ, ನಿಖರ ಪ್ರತಿದಾಳಿ ನಡೆಸಿವೆ ಎಂದು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮಾಹಿತಿ ನೀಡಿದರು. ಬಳಿಕ ಮಾತನಾಡಿದ ಕರ್ನಲ್ ಸೋಫಿಯಾ ಖುರೇಶಿ, ಕಳೆದ ರಾತ್ರಿ ಪಂಜಾಬ್‌ನ ವಾಯುನೆಲೆಯನ್ನು ಗುರಿಯಾಗಿಸಿ, ಪಾಕಿಸ್ತಾನ ಅತಿ ವೇಗದ ಕ್ಷಿಪಣಿ ದಾಳಿ ನಡೆಸಿದೆ. ಜೊತೆಗೆ ಶ್ರೀನಗರ, ಆವಂತಿಪುರ ಮತ್ತು ಉಧಂಪುರದಲ್ಲಿ ಆರೋಗ್ಯ ಸೌಲಭ್ಯಗಳು ಮತ್ತು ಶಾಲೆಗಳ ಮೇಲೆ ದಾಳಿ ನಡೆದಿದೆ. ಆದರೆ ಪಾಕಿಸ್ತಾನದ ಎಲ್ಲಾ ದಾಳಿಗಳನ್ನು ಭಾರತೀಯ ಸೇನೆ ಸಮರ್ಥವಾಗಿ ನಿಗ್ರಹಿಸಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಕರ್ನಲ್ ಸೋಫಿಯಾ ಖುರೇಶಿ (೨೩ ಸೆಕೆಂಡ್ಸ್)

ನಂತರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಭಾರತದ ನಿರ್ಣಾಯಕ ಮೂಲಸೌಕರ್ಯಗಳು, ಸೈಬರ್ ವ್ಯವಸ್ಥೆಗಳು, ವಿದ್ಯುತ್ ವ್ಯವಸ್ಥೆಗಳಿಗೆ ದಾಳಿ ನಡೆಸಿ, ಸಂಪೂರ್ಣವಾಗಿ ನಾಶ ಮಾಡಲಾಗಿದೆ ಎಂಬ ಪಾಕಿಸ್ತಾನದ ವರದಿಗಳು, ಸತ್ಯಕ್ಕೆ ಸಂಪೂರ್ಣವಾಗಿ ದೂರವಾಗಿದೆ. ಪಾಕಿಸ್ತಾನ ಉದ್ದೇಶಪೂರ್ವಕವಾಗಿ ಹರಡುತ್ತಿರುವ ಇಂತಹ ವದಂತಿಗಳನ್ನು ನಂಬಿ ಯಾರು ದಾರಿ ತಪ್ಪದಿರಿ ಎಂದು ಸಲಹೆ ನೀಡಿದ್ದಾರೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು  ಭಾರತೀಯ ಸೇನೆಯ ಮೂರು ಪಡೆಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿದರು.ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಕೂಡ ಸಭೆಯಲ್ಲಿ ಭಾಗವಹಿಸಿದ್ದರು. ಪಾಕಿಸ್ತಾನದ ವಿರುದ್ಧ ಭಾರತ ಪ್ರತೀಕಾರದ ಕ್ರಮ ಕೈಗೊಂಡಿರುವ ನಡುವೆಯೇ ದೆಹಲಿಯ ಪ್ರಧಾನಮಂತ್ರಿಗಳ ನಿವಾಸದಲ್ಲಿ ಈ ಸಭೆ ನಡೆಯಿತು.

**********

ಸಂಶಯಾಸ್ಪದ ವಿಷಯ, ವಿಶೇಷವಾಗಿ ಭಾರತೀಯ ಸಶಸ್ತ್ರ ಪಡೆಗಳ ಬಗ್ಗೆ ಅಥವಾ ಭಾರತ-ಪಾಕಿಸ್ತಾನದ ನಡುವಿನ ಉದ್ವಿಗ್ನ ಪರಿಸ್ಥಿತಿಗೆ ಸಂಬಂಧಿಸಿದ ಯಾವುದೇ ಮಾಹಿತಿಯನ್ನು ಎಚ್ಚರಿಕೆಯಿಂದ ಪರಿಶೀಲಿಸಿ, ಸತ್ಯಾಸತ್ಯತೆ ಸಂಶಯವಿದ್ದಲ್ಲಿ ಅದನ್ನು ಪಿಐಬಿ ಫ್ಯಾಕ್ಟ್ ಚೆಕ್‌ಗೆ ವರದಿ ಮಾಡಬಹುದು. ಅಂತಹ ವಿಷಯವನ್ನು ವಾಟ್ಸಆಪ್ ಸಂಖ್ಯೆ ೮೭೯೯೭೧೧೨೫೯ ಮತ್ತು ಇಮೇಲ್- socialmedia@pib.gov.in ನಲ್ಲಿ ಹಂಚಿಕೊಳ್ಳಬಹುದು.

**********

ದೇಶದಲ್ಲಿ ಯುದ್ಧದ ಸನ್ನಿವೇಶ ಇರುವುದರಿಂದ ಅಧಿಕಾರಿಗಳು ಯುದ್ಧ ಪರಿಸ್ಥಿತಿ ಸಮರ್ಪಕ ನಿರ್ವಹಣೆಗೆ ಸರ್ವ ಸನ್ನದ್ಧರಾಗಬೇಕು ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ನಿರ್ದೇಶಿಸಿದ್ದಾರೆ.ಯುದ್ಧದ ಸನ್ನಿವೇಶದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಕೈಗೊಳ್ಳಬೇಕಾದ ತುರ್ತು ಮುಂಜಾಗ್ರತಾ ಕ್ರಮಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಧಿಕಾರಿ ಹಾಗೂ ಸಿಬ್ಬಂದಿ ಕೇಂದ್ರ ಸ್ಥಾನದಲ್ಲಿದ್ದು, ಪರಿಸ್ಥಿತಿಗೆ ಅಗನುಗುಣವಾಗಿ ಜವಾಬ್ದಾರಿಯುತವಾಗಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

**********

ದೇಶದ ಬಲವರ್ಧನೆ ಮತ್ತು ಮಹಿಳೆಯರು ಸ್ವಾವಲಂಬಿಗಳಾಗಿ ಬದುಕು ಕಟ್ಟಿಕೊಳ್ಳುವಲ್ಲಿ ಸ್ವ-ಸಹಾಯ ಗುಂಪುಗಳ ಪಾತ್ರ ಮಹತ್ತರವಾದುದು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು. ಮಂಗಳೂರಿನಲ್ಲಿಂದು ನಡೆದ ನವೋದಯ ಸ್ವ-ಸಹಾಯ ಗುಂಪುಗಳ ರಜತ ಸಂಭ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಇಂದು ಮಹತ್ತರ ಬದಲಾವಣೆಗಳಾಗಿದ್ದರೆ, ಅದರಲ್ಲಿ ಸ್ವ-ಸಹಾಯ ಗುಂಪುಗಳ ಪಾತ್ರ ಹೆಚ್ಚಿದೆ ಎಂದರು. ಸಂಘಟಿತರಾಗುವ ಮೂಲಕ ಮಹಿಳೆಯರು ಇಂದು ಎಲ್ಲಾ ಕ್ಷೇತ್ರಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಕುಟುಂಬ ಸುಧಾರಣೆಯಲ್ಲೂ ತಮ್ಮ ಪಾತ್ರವನ್ನು ಸಮರ್ಥವಾಗಿ ನಿಭಾಯಿಸುತ್ತಿರುವುದು ಶ್ಲಾಘನೀಯ. ಮಹಿಳೆಯರು ಸ್ವಾವಲಂಬಿಗಳಾಗಿ ಬದುಕು ಕಟ್ಟಿಕೊಳ್ಳುವಲ್ಲಿ ಸರ್ಕಾರಗಳು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಇವುಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಲಹೆ ನೀಡಿದರು.ಕಾರ್ಯಕ್ರಮದಲ್ಲಿ ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ದಿನೇಶ್ ಗುಂಡೂರಾವ್, ಲಕ್ಷ್ಮೀ ಹೆಬ್ಬಾಳ್ಕರ್, ಕೆ.ಎನ್.ರಾಜಣ್ಣ, ರಾಜ್ಯಸಭಾ ಸದಸ್ಯ ಡಾ.ಡಿ.ವೀರೇಂದ್ರ ಹೆಗ್ಗಡೆ ಉಪಸ್ಥಿತರಿದ್ದರು.

**********

ಅಂಚೆ ವ್ಯವಸ್ಥೆಯ ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದ ದಾವಣಗೆರೆ ಅಂಚೆ ವಿಭಾಗ ೧೧ ಪ್ರಶಸ್ತಿಗಳನ್ನು ಪಡೆದುಕೊಂಡಿದೆ ಎಂದು ದಾವಣಗೆರೆ ವಿಭಾಗದ ಸ್ಥಾನಿಕ ಸಹಾಯಕ ಅಂಚೆ ಅಧೀಕ್ಷಕ ಗುರುಪ್ರಸಾದ್ ತಿಳಿಸಿದ್ದಾರೆ. ಪ್ರಶಸ್ತಿ ಪುರಸ್ಕೃತ ಸಿಬ್ಬಂದಿಗಳ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಮೈಸೂರಿನಲ್ಲಿ ನಡೆದ ಕರ್ನಾಟಕ ಅಂಚೆ ವೃತ್ತದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ದಾವಣಗೆರೆ ವಿಭಾಗ ೧೧ ವೃತ್ತ ಪ್ರಶಸ್ತಿಗಳನ್ನು ಪಡೆದಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಮತ್ತಷ್ಟು ಪರಿಣಾಮಕಾರಿಯಾಗಿ ಸೇವೆ ಸಲ್ಲಿಸುವಂತೆ ಅವರು ಕರೆ ನೀಡಿದರು.

**********

ಮಹಾಸಾಧ್ವಿ, ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ರಾಜ್ಯದ ವಿವಿಧೆಡೆ ಆಚರಿಸಲಾಯಿತು.ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮದಲ್ಲಿ ಹೇಮರೆಡ್ಡಿ ಮಲ್ಲಮ್ಮ ಭಾವಚಿತ್ರಕ್ಕೆ ಶಾಸಕ ಧೀರಜ್ ಮುನಿರಾಜು ಪುಷ್ಪ ನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಶಾಸಕರು, ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಮ್ಮ ಕಾಯಕದ ಮೂಲಕ ಜನಾನುರಾಗಿಯಾಗಿ, ಮಹಿಳೆಯರಿಗೆ ಆದರ್ಶವಾಗಿದ್ದರು. ಶ್ರೀಶೈಲ ಮಲ್ಲಿಕಾರ್ಜುನನನ್ನು ತನ್ನ ಆರಾಧ್ಯ ದೈವವಾಗಿ ಆರಾಧಿಸಿ, ಅವರನ್ನು ಸಾಕ್ಷಾತ್ಕರಿಸಿಕೊಂಡ ಹೇಮರಡ್ಡಿ ಮಲ್ಲಮ್ಮ, ಮೋಕ್ಷ ಪಡೆಯಲು ಲೌಕಿಕ ಪ್ರಪಂಚವನ್ನು ತ್ಯಾಗ ಮಾಡದೇ, ಸಂಸಾರದಲ್ಲಿದ್ದುಕೊಂಡೇ ಸದ್ಗತಿ ಹೊಂದಿದರು ಎಂದು ಹೇಳಿದರು. ಅವರ ಜೀವನಮೌಲ್ಯಗಳು ಮನುಕುಲಕ್ಕೆ ಅದರಲ್ಲೂ ಸ್ತ್ರೀಕುಲಕ್ಕೆ ಅಮೂಲ್ಯ ಕಾಣಿಕೆಗಳಾಗಿವೆ. ಇಂತಹ ಮಹನೀಯರ ವಿಚಾರಧಾರೆಗಳು ಹೆಚ್ಚು ಜನರಿಗೆ ತಲುಪಬೇಕಿದೆ ಎಂದು ಶಾಸಕ ಧೀರಜ್ ಮುನಿರಾಜು ತಿಳಿಸಿದರು.

**********

ಹಾವೇರಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಜೋಳ ಖರೀದಿಸಲು ಜಿಲ್ಲೆಯ ಹಲವು ಕಡೆಗಳಲ್ಲಿ ಕೇಂದ್ರಗಳನ್ನು ತೆರೆಯಲಾಗಿದ್ದು, ಈಗಾಗಲೇ ನೋಂದಾಯಿತ ೫೦ ರೈತರಿಂದ ೧ ಸಾವಿರ ೯೨೧ ಕ್ವಿಂಟಲ್ ಜೋಳವನ್ನು ಖರೀದಿಸಿ, ಸಂಗ್ರಹಿಸಿಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಜೋಳ ಖರೀದಿಸಲು ಪ್ರತಿ ಕ್ವಿಂಟಲ್‌ಗೆ ೩ ಸಾವಿರ ೩೭೧ ರೂಪಾಯಿ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಪ್ರತಿ ರೈತರಿ◌ಂದ ಪ್ರತಿ ಎಕರೆಗೆ ೨೦ ಕ್ವಿಂಟಲ್‌ನಂತೆ ಗರಿಷ್ಟ ೧೫೦ ಕ್ವಿಂಟಲ್ ಜೋಳ ಖರೀದಿ ಮಾಡುವ ಗುರಿ ಹೊಂದಲಾಗಿದೆ. ಈಗಾಗಲೇ ತಾಲೂಕಿನ ಖರೀದಿ ಕೇಂದ್ರಗಳಲ್ಲಿ ೬೬೭ ರೈತರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

**********

ನ್ಯಾಯಮೂರ್ತಿ ಡಾ.ಹೆಚ್.ಎಸ್.ನಾಗಮೋಹನದಾಸ ಏಕಸದಸ್ಯ ವಿಚಾರಣಾ ಆಯೋಗದ ಶಿಫಾರಸಿನ ಮೇರೆಗೆ ಪರಿಶಿಷ್ಟ ಜಾತಿಪಟ್ಟಿಯಲ್ಲಿನ ಉಪಜಾತಿಗಳ ಸಮಗ್ರ ಸಮೀಕ್ಷೆಯು ರಾಜ್ಯಾದ್ಯಂತ ನಡೆಯುತ್ತಿದೆ. ಮೊದಲನೆ ಹಂತದ ಮನೆ ಮನೆಯ ಸಮೀಕ್ಷೆಯು ಮೇ ೧೭ ರವರೆಗೆ ನಡೆಯಲಿದೆ. ಎರಡನೇ ಹಂತದಲ್ಲಿ ವಿಶೇಷ ಶಿಬಿರದಲ್ಲಿ ಸಮೀಕ್ಷೆಯು ಮೇ ೧೯ ರಿಂದ ೨೯ ರವರೆಗೆ ನಡೆಯಲಿದೆ. ಮೂರನೇ ಹಂತದ ಸಮೀಕ್ಷೆ ಆನ್‌ಲೈನ್ ಮೂಲಕ ಮೇ ೧೯ ರಿಂದ ೨೩ ರವರೆಗೆ ನಡೆಯಲಿದೆ.

**********

ಮುಂಬರುವ ಮಳೆಗಾಲದಲ್ಲಿ ಉತ್ತರಕನ್ನಡ ಜಿಲ್ಲೆಯ ಯಾವುದೇ ಭಾಗದಲ್ಲಿ ಅವಘಡಗಳು ಸಂಭವಿಸದಂತೆ ಈಗಿನಿಂದಲೇ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು, ಯಾವುದೇ ಜೀವಹಾನಿಯಾಗದಂತೆ ಎಚ್ಚರಿಕೆ ವಹಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

********************